I/83998/2024

ಕರ್ನಾಟಕ ಸರ್ಕಾರ
ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ
(ಕರ್ನಾಟಕ ಸರ್ಕಾರದ ಅಂಗ ಸಂಸ್ಥೆ)
Government of Karnataka
Karnataka Residential Educational Institutions Society
(An Organisation of Govt. of Karnataka)

**ನೇಮಕಾತಿ ಪ್ರಾಧಿಕಾರಿ ಹಾಗೂ ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು**

**ನಂ.8, ಎಂ.ಎಸ್.ಬಿ.-1 ಕನ್ನಿಂಗ್‌ಹ್ಯಾಮ್ ರಸ್ತೆ, ಬೆಂಗಳೂರು-52, ದೂರವಾಣಿ ಸಂಖ್ಯೆ: 080-22265755, ಇ-ಮೇಲ್:** ed.kreis@ka.gov.in

**ವಿಷಯ:** ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದ ವಸತಿ ಶಾಲೆಗಳಿಗೆ ಕರ್ನಾಟಕ ಲೋಕಸೇವಾ ಆಯೋಗದ ಮುಖಾಂತರ ಹೆಚ್ಚುವರಿ ಆಯಿಪಟ್ಟಿಯಲ್ಲಿಆಯ್ಕೆಯಾದ ಆಂಗ್ಲ ಭಾಷಾ ಶಿಕ್ಷಕರ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡುವ ಬಗ್ಗೆ.

**ಉಲ್ಲೇಖ**: 1. ಕರ್ನಾಟಕ ಲೋಕಸೇವಾ ಆಯೋಗದ ಅಧಿಸೂಚನೆ ಸಂಖ್ಯೆ:ಆರ್ (2)1084/2017-18/ ಪಿ.ಎಸ್.ಸಿ, ದಿನಾಂಕ:23.06.2017.
2. ಹೆಚ್ಚುವರಿ ಆಯ್ಕೆಪಟ್ಟಿ ಅಧಿಸೂಚನೆ ಸಂಖ್ಯೆ: ಡಿ ಎಸ್‌ಸಿ ಆರ್ ಟಿ ಬಿ(2)22-23/1802 ದಿನಾಂಕ: 17.08.2023

**ಪ್ರಸ್ತಾವನೆ:-**

ಕರ್ನಾಟಕ ಲೋಕಸೇವಾ ಆಯೋಗವು ಉಲ್ಲೇಖ (1) ರಲ್ಲಿ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿರುವ ವಸತಿ ಶಾಲೆಗಳ ನೇಮಕಾತಿ ಪ್ರಕ್ರಿಯೆಯಲ್ಲಿ ಗೈರುಹಾಜರಾದ ಅಭ್ಯರ್ಥಿಗಳ ಎದುರಾಗಿ ಉಲ್ಲೇಖ(2)ರಲ್ಲಿ ಆಂಗ್ಲ ಭಾಷಾ ಶಿಕ್ಷಕರ ಹುದ್ದೆಗಳ ಹೆಚ್ಚುವರಿ ಆಯಿಪಟ್ಟಿಯನ್ನು ಪ್ರಕಟಿಸಲಾಗಿರುತ್ತದೆ. ಹೆಚ್ಚುವರಿ ಆಯ್ಕೆಪಟ್ಟಿಯ ಪ್ರಕಾರ ನೇಮಕಾತಿಗೆ ಸಂಬಂಧಿಸಿದಂತೆ, ಜಾತಿ ಸಿಂಧುತ್ವ, ಪೊಲೀಸ್ ವರದಿ, ವೈದ್ಯಕೀಯ ಪ್ರಮಾಣ ಪತ್ರಗಳು ಮತ್ತು ಅಂಕಪಟ್ಟಿಗಳ ನೈಜತೆ ಪ್ರಮಾಣ ಪತ್ರಗಳು ಸ್ವೀಕೃತವಾಗಿದ್ದು, ಈ ಮುಂದೆ ತಿಳಿಸಿದ ಷರತ್ತು/ನಿಬಂಧನೆಗಳಿಗೊಳಪಟ್ಟು ಕೌನ್ಸಿಲಿಂಗ್ ನಲ್ಲಿ ಆಯ್ಕೆ ಮಾಡಿಕೊಂಡ ವಸತಿ ಶಾಲೆಗಳಿಗೆ ನೇಮಕಾತಿ ಆದೇಶ ನೀಡಿ, ಸ್ಥಳ ನಿಯುಕ್ತಿಗೊಳಿಸಲು ಈ ಕೆಳಕಂಡಂತೆ ಆದೇಶ.

**:: ಆದೇಶ ::**

**ಸಂಖ್ಯೆ: ಕವಶಿಸಸ/ಆಡಳಿತ/ನೇ.ನೇ-ಹೆ ಆ ಪ/ಆ.ಭಾಶಿ/ಸಿ.ಆರ್ /2023-24 ದಿನಾಂಕ:25.03.2024**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿರುವ ವಸತಿ ಶಾಲೆಗಳ ಆಂಗ್ಲ ಭಾಷಾ ಶಿಕ್ಷಕರ ನೇಮಕಾತಿ ಪ್ರಕ್ರಿಯೆಯಲ್ಲಿ ಗೈರುಹಾಜರಾದ ಅಭ್ಯರ್ಥಿಗಳ ಎದುರಾಗಿ ಆಂಗ್ಲ ಭಾಷಾ ಶಿಕ್ಷಕರ ಹುದ್ದೆಗಳ ಹೆಚ್ಚುವರಿ ಆಯಿಪಟ್ಟಿಯಲ್ಲಿ ನೇರ ನೇಮಕಾತಿಯಲ್ಲಿ ಆಯ್ಕೆಗೊಂಡ ಈ ಕೆಳಕಂಡ ಅಭ್ಯರ್ಥಿಗೆ ಅವರ ಹೆಸರಿನ ಮುಂದೆ ಸೂಚಿಸಿರುವಂತೆ ತಕ್ಷಣದಿಂದಲೇ ಜಾರಿಗೆ ಬರುವಂತೆ ನೇಮಕಾತಿ ಮಾಡಿ ಸ್ಥಳನಿಯುಕ್ತಿಗೊಳಿಸಿ ಆದೇಶಿಸಿದೆ.

**ಆಂಗ್ಲ ಭಾಷಾ ಶಿಕ್ಷಕರು**

**ಕಲ್ಯಾಣ ಕರ್ನಾಟಕ ವೃಂದದ ಅಭ್ಯರ್ಥಿ**

ವೇತನ ಶ್ರೇಣಿ (33450-850-36000-950-39800-1100-46400-1250-53900-1450-62600)

| ಕ್ರ. ಸಂ. | ಕೆಪಿಎಸ್‌ಸಿ ರ್ಯಾಂಕ್ | ಅಭ್ಯರ್ಥಿಯ ಹೆಸರು (ಶ್ರೀ/ಶ್ರೀಮತಿ/ಕು) | ನೋಂದಣಿ ಸಂಖ್ಯೆ | ಆಯ್ಕೆಯಾದ ವರ್ಗ | ಕೌನ್ಸಿಲಿಂಗ್‌ನಲ್ಲಿ ಆಯ್ಕೆಮಾಡಿಕೊಂಡ ವಸತಿ ಶಾಲೆಯ ಹೆಸರು ಮತ್ತು ವಿಳಾಸ |
|---|---|---|---|---|---|
| 1 | 39 | MALLESHA K | 1355219 | 2A | MDRS(Co) ( 194 ST ) THIMMARAJIPURA CHAMARAJANAGARA |

**ಈ ನೇಮಕಾತಿಯು ಕೆಳಕಾಣಿಸಿರುವ ಷರತ್ತುಗಳಿಗೆ ಒಳಪಟ್ಟಿರುತ್ತದೆ.**

1. ಅಭ್ಯರ್ಥಿಯು ಕರ್ನಾಟಕ ಸಿವಿಲ್ ಸೇವಾ ಸಾಮಾನ್ಯ ನೇಮಕಾತಿ ನಿಯಮಗಳು, 1977 ರ ನಿಯಮ (18)ರನ್ವಯ ನೇಮಕಾತಿ ಆದೇಶ ಹೊರಡಿಸಿದ ದಿನಾಂಕದಿಂದ 15 ದಿವಸದೊಳಗಾಗಿ ನಿಯುಕ್ತಿಗೊಳಿಸಿದ ಸ್ಥಳದಲ್ಲಿ ಕರ್ತವ್ಯ ವರದಿ ಮಾಡಿಕೊಳ್ಳತಕ್ಕದ್ದು. ನಿಗದಿತ ದಿನಾಂಕದೊಳಗೆ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳದಿದ್ದಲ್ಲಿ

ಯಾವುದೇ ಮುನ್ಸೂಚನೆ ನೀಡದೆ ನೇಮಕಾತಿ ಆದೇಶವನ್ನು ರದ್ದುಗೊಳಿಸಲಾಗುವುದು.

2. ಅಭ್ಯರ್ಥಿಯು ಸೇವೆಗೆ ಹಾಜರಾಗಿ ಭಾರತ ಸಂವಿಧಾನದ ರೀತ್ಯಾ ನಿಷ್ಠೆಯ ಪ್ರಮಾಣ ವಚನ ಸ್ವೀಕರಿಸುವುದು.
3. ಕರ್ನಾಟಕ ಸರ್ಕಾರಿ ನೌಕರರ (ಜೇಷ್ಠತಾ) ನಿಯಮಗಳು, 1957ರ ನಿಯಮಗಳನ್ವಯ ಜೇಷ್ಠತೆಯನ್ನು ಪರಿಗಣಿಸಲಾಗುವುದು.
4. ಅಭ್ಯರ್ಥಿಯು ತಾನು ಒದಗಿಸಿರುವ ಮಾಹಿತಿಗಳು ಸತ್ಯವೆಂದು ಹಾಗೂ ಕರ್ನಾಟಕ ಲೋಕಸೇವಾ ಆಯೋಗದಿಂದ ಹೊರಡಿಸಲಾಗಿರುವ ಅಂತಿಮ ಆಯ್ಕೆಪಟ್ಟಿಯಲ್ಲಿನ ಜೇಷ್ಠತೆಗೆ ಬದ್ಧನಾಗಿರುವುದಾಗಿ ರೂ.100/- ಮೊತ್ತದ ಛಾಪಾ ಕಾಗದದಲ್ಲಿ Affidavit ಸಲ್ಲಿಸಿರುವಂತೆ ಈ ನೇಮಕಾತಿ ಆದೇಶವನ್ನು ನೀಡಲಾಗಿದೆ. ಒಂದು ವೇಳೆ ಒದಗಿಸಿದ ಮಾಹಿತಿಗಳು ಭವಿಷ್ಯದಲ್ಲಿ ಕೃತ್ರಿಮ ಅಥವಾ ತಪ್ಪು ಎಂದು ಕಂಡು ಬಂದಲ್ಲಿ ಈ ನೇಮಕಾತಿಯನ್ನು ರದ್ದುಪಡಿಸಿ, ಕೆ.ಸಿ.ಎಸ್ (ಸಾಮಾನ್ಯ ನಿಯಮ) 1977ರ ನಿಯಮಗಳನ್ವಯ ಕ್ರಮಕ್ಕೆಗೊಳ್ಳಲಾಗುವುದು. ಅಂತಹ ತಪ್ಪುಗಳಿಗೆ ಅಭ್ಯರ್ಥಿಯೇ ಸಂಪೂರ್ಣ ಹಾಗೂ ನೇರ ಹೊಣೆಗಾರರಾಗಿರುತ್ತಾರೆ.
5. ಸಂಘದ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಅಭ್ಯರ್ಥಿಗಳು ಸಲ್ಲಿಸಿರುವ ಪ್ರಮಾಣ ಪತ್ರಗಳನ್ನು ಸಂಬಂಧಿಸಿದ ವಿಶ್ವವಿದ್ಯಾಲಯಗಳಿಂದ ನೀಡಿರುವ ನೈಜತೆ ದೃಢೀಕರಣದನ್ವಯ ನೇಮಕಾತಿ ಆದೇಶವನ್ನು ಹೊರಡಿಸಲಾಗಿರುತ್ತದೆ. ಈ ಬಗ್ಗೆ ಮುಂದಿ ದಿನಗಳಲ್ಲಿ ನ್ಯಾಯಾಲಯ/ ಇತರೆ ದೂರುಗಳನ್ವಯ ಪರಿಶೀಲನೆಗೆ ಒಳಪಟ್ಟು ಸಲ್ಲಿಸಿರುವ ಪ್ರಮಾಣ ಪತ್ರವು ಕೃತ್ರಿಮ ಎಂದು ಸಾಬೀತಾದಲ್ಲಿ, ಯಾವುದೇ ಸೂಚನೆ ನೀಡದೆ ಕರ್ತವ್ಯದಿಂದ ಬಿಡುಗಡೆಗೊಳಿಸಲಾಗುವುದು ಹಾಗೂ ನಿಯಮಾನುಸಾರ ಶಿಸ್ತುಕ್ರಮ ಜರುಗಿಸಲಾಗುವುದು.
6. ಅಭ್ಯರ್ಥಿಯು 2 ವರ್ಷಗಳ ಖಾಯಂಪೂರ್ವ ಅವಧಿಯನ್ನು ತೃಪ್ತಿಕರವಾಗಿ ಪೂರ್ಣಗೊಳಿಸತಕ್ಕದ್ದು. ಈ ಖಾಯಂಪೂರ್ವ ಸೇವಾ ಅವಧಿಯು ಪೂರ್ಣಗೊಳ್ಳುವ ಒಳಗಾಗಿ ಹುದ್ದೆಗೆ ಕಾಲಕಾಲಕ್ಕೆ ನಿಗದಿಪಡಿಸಿದ ಇಲಾಖಾ ಪರೀಕ್ಷೆಗಳನ್ನು ಕಡ್ಡಾಯವಾಗಿ ತೇರ್ಗಡೆಯಾಗತಕ್ಕದ್ದು.
7. ಅಭ್ಯರ್ಥಿಯು ಕರ್ತವ್ಯಕ್ಕೆ ಹಾಜರಾಗುವ ಸಂದರ್ಭದಲ್ಲಿ, ವಿದ್ಯಾರ್ಹತೆ ಬಗ್ಗೆ ಎಲ್ಲಾ ದಾಖಲಾತಿಗಳ (ಎಸ್.ಎಸ್.ಎಲ್.ಸಿ, ದ್ವಿತೀಯ ಪಿ.ಯು.ಸಿ., ಪದವಿ, ಬಿ.ಇಡಿ, ಸ್ನಾತಕೋತ್ತರ ಪದವಿ ಇತ್ಯಾದಿ) ಹಾಗೂ ಜನ್ಮ ದಿನಾಂಕ ದೃಢಪಡಿಸುವ ಬಗ್ಗೆ ದಾಖಲಾತಿಗಳ (ಎಸ್.ಎಸ್.ಎಲ್.ಸಿ. ಅಂಕಪಟ್ಟಿ) ಎರಡು ಸೆಟ್ ದೃಢೀಕೃತ ಜೆರಾಕ್ಸ್ ಪ್ರತಿಗಳನ್ನು ಸಲ್ಲಿಸತಕ್ಕದ್ದು.
8. ಒಬ್ಬರಿಗಿಂತ ಹೆಚ್ಚು ಪತ್ನಿ/ಪತಿಯವರನ್ನು ಹೊಂದಿರುವುದಿಲ್ಲ ಎಂಬ ಬಗ್ಗೆ ರೂ.100/- ಮೊತ್ತದ Affidavit ಛಾಪಾ ಕಾಗದವನ್ನು ಕರ್ತವ್ಯಕ್ಕೆ ವರದಿ ಮಾಡಿಕೊಳ್ಳುವ ಮೊದಲು ನೀಡುವುದು.
9. ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಎಲ್ಲಾ ನಿಯಮಗಳು, ಮಾರ್ಗಸೂಚಿಗಳಿಗೆ ಕೆ.ಸಿ.ಎಸ್ ನಿಯಮಗಳಿಗೆ ಹಾಗೂ ಚಾಲ್ತಿಯಲ್ಲಿರುವ ಇತರೆ ಎಲ್ಲಾ ಸೇವಾ ನಿಯಮಗಳಿಗೆ ಬದ್ಧರಾಗಿರತಕ್ಕದ್ದು.
10. ಅಭ್ಯರ್ಥಿಯ ಕರ್ತವ್ಯಕ್ಕೆ ಹಾಜರಾಗಲು ಯಾವುದೇ ಪ್ರಯಾಣ ಭತ್ಯೆ ಮತ್ತು ದಿನ ಭತ್ಯೆಗಳನ್ನು ನೀಡಲಾಗುವುದಿಲ್ಲ.
11. ಅಭ್ಯರ್ಥಿಯು ಸರ್ಕಾರದ ಆದೇಶ ಸಂಖ್ಯೆ FD/SPL/04/PET/2005, ದಿನಾಂಕ 31.03.2006 ರಂತೆ NPS ಯೋಜನೆಗೆ ಒಳಪಟ್ಟಿರುತ್ತಾರೆ. ದಿನಾಂಕ: 01.04.2006 ರ ನಂತರ ಸೇವೆಗೆ ನೇಮಕಗೊಂಡ ನೌಕರರ ಮೂಲ ವೇತನ ಮತ್ತು ತುಟ್ಟಿ ಭತ್ಯೆಯ ಒಟ್ಟು ಮೊತ್ತವನ್ನು ಆದೇಶದನ್ವಯ ಅವರ ಪ್ರತಿ ಮಾಹೆಯ ವೇತನದಲ್ಲಿ ನಿವೃತ್ತಿ ಸೌಲಭ್ಯದ ವಂತಿಗೆಯಾಗಿ ಕಟಾಯಿಸಲಾಗುವುದು.
12. ಅಭ್ಯರ್ಥಿಯು ಕರ್ನಾಟಕ ಸಿವಿಲ್ ಸೇವಾ (ಪರಿವೀಕ್ಷಣಾ) ನಿಯಮಗಳು, 1977 ರನ್ವಯ ಕರ್ತವ್ಯಕ್ಕೆ ಹಾಜರಾದ ದಿನಾಂಕದಿಂದ ಎರಡು ವರ್ಷಗಳ ಪರೀಕ್ಷಾರ್ಥ ಸೇವಾ ಅವಧಿಗೆ ಒಳಪಟ್ಟಿರುತ್ತಾರೆ.
13. ನೇಮಕಾತಿ ಹೊಂದಿದ ಅಭ್ಯರ್ಥಿಗಳು ನಿಯುಕ್ತಿಗೊಳಿಸಿದ ಸ್ಥಳದಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಂಡ ಬಗ್ಗೆ ಸಂಬಂಧಿಸಿದ ಪ್ರಾಂಶುಪಾಲರು 3 ದಿನಗಳೊಳಗಾಗಿ ಕೇಂದ್ರ ಕಛೇರಿಗೆ ವರದಿ ಕಳುಹಿಸತಕ್ಕದ್ದು ಹಾಗೂ ನೌಕರರಿಗೆ ಮೊದಲ ತಿಂಗಳ ವೇತನ ಡ್ರಾ ಮಾಡುವ ಮೊದಲು ಕೇಂದ್ರ ಕಛೇರಿಯಿಂದ ಪ್ರಥಮ ವೇತನ ಪ್ರಮಾಣ ಪತ್ರ ಪಡೆಯತಕ್ಕದ್ದು.

Signed by
Praveen Bagewadi
Date: 25-03-2024 18:24:55

**ಕಾರ್ಯನಿರ್ವಾಹಕ ನಿರ್ದೇಶಕರು**
**ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ,**
**ಬೆಂಗಳೂರು.**

**<u>ಪ್ರತಿಯನ್ನು ಮಾಹಿತಿಗಾಗಿ:-</u>**

1. ಮಾನ್ಯ ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ ರವರ ಮಾಹಿತಿಗಾಗಿ ಸಲ್ಲಿಸಿದೆ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ.

I/83998/2024

3. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ರವರಿಗೆ,
4. ಜಂಟಿ ನಿರ್ದೇಶಕರು (ಆಡಳಿತ/ಶಿಕ್ಷಣ) ಕವಶಿಸಪ ಬೆಂಗಳೂರು ರವರಿಗೆ
5. ಎಲ್ಲಾ ಜಿಲ್ಲಾ ಜಂಟಿ ನಿರ್ದೇಶಕರು/ಉಪನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ ರವರಿಗೆ
6. ಸಂಬಂಧಪಟ್ಟ ವಸತಿ ಶಾಲೆಯ ಪ್ರಾಂಶುಪಾಲರಿಗೆ ಸೂಕ್ತ ಕ್ರಮಕ್ಕಾಗಿ.
7. ಸಂಬಂಧಿಸಿದ ಅಭ್ಯರ್ಥಿಗಳಿಗೆ.
8. ಕಛೇರಿ ಪ್ರತಿ.

ನಂ.8, ಎಮ್.ಎಸ್.ಬಿ.-1,6&7ನೇ ಮಹಡಿ, ಕನ್ನಿಂಗ್ ಹ್ಯಾಮ್ ರಸ್ತೆ, ಬೆಂಗಳೂರು-560052, ದೂರವಾಣಿ: 080-22283366, 222265755, 22204466, 22207722, ಟೆಲಿಫ್ಯಾಕ್ಸ್ : 080-22262288
#8, M.S.B-1,6th & 7th Floor, Cunningham Road, Bengaluru-560052. Phone: 080-22283366, 222265755, 22204466, 22207722, Telefax : 080-22262288
Email : edkreis@rediffmail.com, ed.kreis@ka.gov.in Website : www.kreis.kar.nic.in